Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in principal@klsvdit.edu.in**

Date: 20-03-2022

**ಪತ್ರಿಕಾ ಪ್ರಕಟಣೆ:**

## ಪಾಲಕರ ಸಭೆ ಆಯೋಜನೆ

ಕರ್ನಾಟಕ ಲಾ ಸೊಸೈಟಿಯ ವಿಶ್ವನಾಥರಾವ್ ದೇಶಪಾಂಡೆ ತಾಂತ್ರಿಕ ಮಹಾವಿದ್ಯಾಲಯ, ಹಳಿಯಾಳದಲ್ಲಿ ಮಾರ್ಚ್ 20 ರಂದು ಪಾಲಕರ ಸಭೆ ಆಯೋಜಿಸಲಾಗಿತ್ತು. ಪ್ರಥಮ ಮತ್ತು ದ್ವಿತೀಯ ವರ್ಷದ ವಿದ್ಯಾರ್ಥಿಗಳ 200 ಕ್ಕೂ ಹೆಚ್ಚು ಪಾಲಕರು ಈ ಸಭೆಯಲ್ಲಿ ಪಾಲ್ಗೊಂಡಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ವಿ ಎ ಕುಲಕರ್ಣಿ ಅವರು ನೆರೆದವರನ್ನುದ್ದೇಶಿಸಿ ಮಾತನಾಡುತ್ತ ವಿದ್ಯಾರ್ಥಿಗಳು, ಪಾಲಕರು ಮತ್ತು ಶಿಕ್ಷಕರಲ್ಲಿರುವ ಅಂತರವನ್ನು ಕಡಿಮೆ ಮಾಡುವುದು ಹಾಗೂ ವಿದ್ಯಾರ್ಥಿಗಳ ಸರ್ವತೋಮುಖ ಏಳಿಗೆಗೆ ಒತ್ತು ನೀಡಿ ಆದರ್ಶ ನಾಗರಿಕರನ್ನಾಗಿ ರೂಪಿಸುವಲ್ಲಿ ಪಾಲಕರ ಸಭೆ ಪ್ರಮುಖ ಪಾತ್ರ ವಹಿಸುತ್ತದೆ ಎಂದು ತಿಳಿಸಿದರು. ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳು ಹಲವು ಇಂಜನಿಯರಿಂಗ್ ಕ್ಷೇತ್ರಗಳ ಜ್ಞಾನ ಹೊಂದುವುದು ಅಗತ್ಯವಾಗಿದ್ದು ಮಹಾವಿದ್ಯಾಲಯ ಈ ದಿಶೆಯಲ್ಲಿ ಅಗತ್ಯ ಸೌಲಭ್ಯ ನೀಡುತ್ತಿದೆ ಎಂದು ನುಡಿದರು. ಪ್ಲೇಸ್ಮೆಂಟ್ ಸಂಚಾಲಕರಾದ ಪ್ರೊ. ರಜತ್ ಆಚಾರ್ಯ ವಿದ್ಯಾರ್ಥಿಗಳಿಗೆ ನೀಡುತ್ತಿರುವ ತರಬೇತಿ ಮತ್ತು ಕಂಪನಿಗಳ ನೇಮಕಾತಿ ಪ್ರಕ್ರಿಯೆಯ ಚಿತ್ರಣ ನೀಡಿದರು ಹಾಗೂ ಈ ಸೆಮಿಸ್ಟರ್ ನಲ್ಲಿ ಕೊನೆಯ ವರ್ಷದ ವಿದ್ಯಾರ್ಥಿಗಳು 25 ಪ್ರಖ್ಯಾತ ಕಂಪನಿಗಳಲ್ಲಿ 185 ಉದ್ಯೋಗಾವಕಾಶಗಳನ್ನು ಪಡೆದಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪಾಲಕರು ಸಂಬಂಧಿಸಿದ ವಿಭಾಗಗಳಿಗೆ ಭೇಟಿ ನೀಡಿ ತಮ್ಮ ಮಕ್ಕಳ ಶೈಕ್ಷಣಿಕ ಪ್ರಗತಿಯ ಕುರಿತು ಬೋಧಕ ಸಿಬ್ಬಂದಿಗಳ ಜೊತೆ ಸಂವಾದ ನಡೆಸಿದರು. ಪಾಲಕರಾದ ಡಾಂಡೇಲಿ ಮೂಲದ ಶ್ರೀ. ರವಿ ಪೈ, ಶ್ರೀ. ಡೇವಿಡ್ ಎ ಮತ್ತು ಹುಬ್ಬಳ್ಳಿ ಮೂಲದ ಶ್ರೀ. ವಿಲ್ಸನ್ ಎಮ್. ಜೆ. ತಮ್ಮ ಅಭಿಪ್ರಾಯ ತಿಳಿಸುತ್ತ ಕಾಲೇಜಿನ ಸೌಕರ್ಯಗಳ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು. ವಿದ್ಯಾರ್ಥಿನಿ ಸಂಜನಾ ಶಿವಾಪುರಮಠ್ ನಿರೂಪಿಸಿದರು. ಮಹಾವಿದ್ಯಾಲಯದ ಆಡಳಿತ ವಿಭಾಗ ಮುಖ್ಯಸ್ಥರಾದ ಪ್ರೊ. ಮಂಜುನಾಥ ಡಿ, ಡಾ. ಆರ್ ಎಸ್ ಮುನ್ನೊಳ್ಳಿ, ಡಾ. ಮಹೇಂದ್ರ ದೀಕ್ಷಿತ್, ಪ್ರೊ. ಎಸ್ ಡಿ ಕುಲಕರ್ಣಿ, ಎಲ್ಲ ವಿಭಾಗಗಳ ಮುಖ್ಯಸ್ಥರು ಮತ್ತು ಸಿಬ್ಬಂದಿ ವರ್ಗದವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಪ್ರಾಂಶುಪಾಲರು

Principal
KLS Vishwanathrao Deshpande
Institute of Technology, Haliyal


PARENTS MEET
KLS
VDIT


INSTITUTE OF TECHNOLOGY
PARENTS MEET
KLS
VDIT






SHOT ON OPPO


PARENTS
KLS






PARENTS MEET
KLS


PARENTS MEET
KLS
VDIT




PARENTS MEET
KLS
VDIT



